# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1757 (1994)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಕಂದಾಯ ಸಚಿವರು

ವಿಷಯ : ಅಕ್ರಮ ಒತ್ತುವರಿ ಸರ್ಕಾರಿ ಜಾಗದಲ್ಲಿ ಕಟ್ಟಡ ನಿರ್ಮಾಣ ಕುರಿತು

(ಅ) ಬೆಂಗಳೂರು ನಗರಜಿಲ್ಲೆಯ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂಬರ್ 63 ರಲ್ಲಿ 5 ಎಕರೆ ಸ್ಥಳವನ್ನು ಇಸ್ಲಾಮಿ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಅಕ್ರಮವಾಗಿ ಒತ್ತುವರಿ ಮಾಡಿದ ಜಾಗದಲ್ಲಿ ಯಾವಾಗ ಕಟ್ಟಡ ಕಟ್ಟಲು ಆರಂಭಿಸಿದರು; ಈ ಬಗ್ಗೆ ಸರ್ಕಾರಕ್ಕೆ ಅಕ್ರಮ ಕಟ್ಟಡ ನಿರ್ಮಾಣದ ಕುರಿತು ಮಾಹಿತಿ ಬಂದ ದಿನಾಂಕ ಯಾವುದು;

(ಆ) ಆಕ್ರಮಿತ ಜಾಗದಲ್ಲಿರುವ ಅಕ್ರಮ ಕಟ್ಟಡದ ವಿಸ್ತೀರ್ಣವೆಷ್ಟು; ಅದರಲ್ಲಿ ಎಷ್ಟು ಮಹಡಿಗಳು ಇವೆ; (ಸಂಪೂರ್ಣ ವಿವರ ನೀಡುವುದು)

(ಇ) ಈ ಸರ್ವೆ ನಂಬರ್ 63 ರಲಿ ್ಲಅಕ್ರಮವಾಗಿ ಕಟ್ಟಡ ನಿರ್ಮಾಣ ಸಮಯದಲ್ಲಿ ಅಕ್ರಮ ನಿರ್ಮಾಣ ಕುರಿತು ಸದರಿ ಸಂಸ್ಥೆಯವರಿಗೆ ಎಷ್ಟು ಬಾರಿ ನೋಟಿಸ್ ನೀಡಲಾಗಿದೆ; ಯಾವ ಯಾವ ದಿನಾಂಕಗಳಂದು ನೋಟೀಸ್ ನೀಡಲಾಗಿದೆ; ನೋಟೀಸ್‌ಗೆ ಉತ್ತರ ಬರದಿದ್ದಲ್ಲಿ ಈ ಕುರಿತು ಕೈಗೊಂಡ ಕ್ರಮಗಳೇನು?